

# ಕನ್ನಡ ಪೋಸ್ಟ್

KANNADA POST

ಇದು ಸುದ್ದಿ ವಿಲಾಸ

ಕನ್ನಡ ದಿನಪತ್ರಿಕೆ

ಸಂಪಾದಕ : ಮಂಜು ಬನವಾಸೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 57 | Pages. 2 | Date: 29-01-2026, THURSDAY | RNI NO: KARKAN/2024/89601 | Kannada Daily

ಸಂಪುಟ : 02 – ಸಂಚಿಕೆ : 57 – ಪುಟಗಳು : 2 | 29-01-2026 | ಗುರುವಾರ | Ph: 8762954248 | ದರ : ₹1


# ಜೆಡಿಎಸ್ ಜನತಾ ಸಮಾವೇಶ ಭರ್ಜರಿ ಯಶಸ್ಸು

## ಕಾರ್ಯಕರ್ತರಿಗೆ ಶಾಸಕ ಹೆಚ್.ಪಿ.ಸ್ವರೂಪ್ ಅಭಿನಂದನೆ | ಕಾಂಗ್ರೆಸ್ ವಿರುದ್ಧ ವಾಗ್ದಾಳಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಜ. 24 ರಂದು ಹಾಸನದಲ್ಲಿ ನಡೆದ ಜನತಾ ಸಮಾವೇಶ ಅಭೂತಪೂರ್ವ ಯಶಸ್ಸು ಕಂಡಿದ್ದು, ಮುಂಬರುವ ಚುಣಾವಣೆಗಳಿಗೆ ದಿಕ್ಸೂಚಿಯಾಗಿದೆ ಎಂದು ಜೆಡಿಎಸ್ ಜಿಲ್ಲಾಧ್ಯಕ್ಷ ಕೆ.ಎಸ್.ಲಿಂಗೇಶ್ ಹಾಗೂ ಶಾಸಕ ಹೆಚ್.ಪಿ.ಸ್ವರೂಪ್ ಹೇಳಿದರು.

ಸುದ್ದಿಗೋಷ್ಟಿಯಲ್ಲಿ ಬುಧವಾರ ಮಾತನಾಡಿ, ಪಕ್ಷದ ಬೆಳ್ಳಿ ಹಬ್ಬದ ಅಂಗವಾಗಿ ನಗರದಲ್ಲಿ ಮಾಜಿ ಸಚಿವ ಹೆಚ್.ಡಿ. ರೇವಣ್ಣ ನೇತೃತ್ವದಲ್ಲಿ ಸಮಾವೇಶ ನಿರೀಕ್ಷೆಗೂ ಮೀರಿ ಯಶಸ್ವಿಯಾಯಿತು. ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರು, ಯುವಕರು ಭಾಗಿಯಾಗಿದ್ದು ಸಂತಸ ತಂದಿದೆ. ಅದಕ್ಕೆ ಶ್ರಮಿಸಿದ ನಿಖಿಲ್ ಕುಮಾರಸ್ವಾಮಿ, ಡಾ.ಸೂರಜ್ ರೇವಣ್ಣ, ಜಿಲ್ಲೆಯ ಎಲ್ಲಾ ಶಾಸಕರು, ಕಾರ್ಯಕರ್ತರು, ಡಿಸಿಸಿ, ಕೆಎಂಎಫ್, ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಹಾಗೂ ಸ್ಥಳೀಯ ಸಂಘ-ಸಂಸ್ಥೆಗಳ ಚುನಾಯಿತರಿಗೆ ಧನ್ಯವಾದ ಸಲ್ಲಿಸುತ್ತೇವೆ ಎಂದರು.

ಸಮಾವೇಶ ಯಶಸ್ಸಿಗೆ ಬೂವನಹಳ್ಳಿ ಹಾಗು ಸುತ್ತಮುತ್ತಲ ಗ್ರಾಮಸ್ಥರೂ ಸಹಕಾರ ನೀಡಿದರು. ಪೊಲೀಸ್ ಇಲಾಖೆಯೂ ಸಹಕಾರ ನೀಡಿದೆ. ಪಕ್ಷ ಸಂಘಟನೆ ಉದ್ದೇಶದಿಂದ ಹಮ್ಮಿಕೊಂಡಿದ್ದ ಸಮಾವೇಶ ಫಲಪ್ರದವಾಗಿದೆ.

ಕಾರ್ಯಕರ್ತರು, ಅಭಿಮಾನಿಗಳು ಆಗಮಿಸಿದ್ದು ಅತೀವ ಸಂತಸ ಉಂಟು ಮಾಡಿದೆ. ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಪಕ್ಷಕ್ಕೆ




ಅನುಕೂಲಕರ ವಾತಾವರಣ ನಿರ್ಮಾಣವಾಗಿದೆ ಎಂದರು.

### ಗೋಪಾಲಸ್ವಾಮಿಗೆ ಟಾಂಗ್

ಜಿಲ್ಲೆಗೆ ಸಚಿವರು ಬಂದಾಗ ಅವರ ಬಾಲ ಹಿಡಿದು ತಿರುಗಾಡುವುದಲ್ಲ. ಕಾಂಗ್ರೆಸ್ ಸರ್ಕಾರ ಜಿಲ್ಲೆಗೆ ಏನು ಕೊಡುಗೆ ನೀಡಿದೆಯೆಂಬುದನ್ನು ಮೊದಲು ಸ್ಪಷ್ಟಪಡಿಸಲಿ ಎಂದು ಶಾಸಕ ಹೆಚ್.ಪಿ.ಸ್ವರೂಪ್ ಅವರು ವಿಧಾನ ಪರಿಷತ್ ಮಾಜಿ ಸದಸ್ಯ ಎಂ.ಎ.ಗೋಪಾಲಸ್ವಾಮಿಗೆ ಟಾಂಗ್ ನೀಡಿದರು.

ಜನತಾ ಸಮಾವೇಶದ ಕುರಿತು ಮಾತನಾಡುವ ನೈತಿಕತೆ ಗೋಪಾಲಸ್ವಾಮಿ ಅವರಿಗೆ ಇಲ್ಲ. ಅವರು ಎಂಎಲ್‌ಸಿಯಾಗಲು ಜೆಡಿಎಸ್‌ನ ಯಾರಿಗೆಲ್ಲ ಕರೆ ಮಾಡಿದ್ದರು ಎಂಬುದನ್ನು ಬಹಿರಂಗ ಪಡಿಸಲಿ, ಅಭಿವೃದ್ಧಿಪರ ಯೋಚಿಸುವವರು ಎರಡನೇ ಬಾರಿ ಚುನಾವಣೆಗೆ ಸ್ಪರ್ಧಿಸದೆ ಶಂಕರ್ ಅವರನ್ನು ಕಣಕ್ಕಿಳಿಸಿದ್ದು ಏಕೆ ಎಂದು ಪ್ರಶ್ನಿಸಿದರು.

> ಜನತಾ ಸಮಾವೇಶದ ವೇದಿಕೆಯಲ್ಲಿ ಯಾರಿಗೆ ಆದ್ಯತೆ ನೀಡಿದ್ದೇವೆ, ಯಾರನ್ನು ಕಡೆಗಣಿಸಿದ್ದೇವೆ ಎಂಬುದರ ಕುರಿತು ಕಾಂಗ್ರೆಸ್‌ನವರು ಚಿಂತಿಸುವ ಅವಶ್ಯಕತೆಯಿಲ್ಲ. ಎಲ್ಲಾ ಪಕ್ಷಗಳಲ್ಲೂ ಕುಟುಂಬ ರಾಜಕೀಯ ಇದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪುತ್ರ, ಮೊಮ್ಮಗ ರಾಜಕೀಯ ಮಾಡುತ್ತಿಲ್ಲವೇ.
>
> – ಹೆಚ್.ಪಿ.ಸ್ವರೂಪ್, ಶಾಸಕ

ಗಣರಾಜ್ಯೋತ್ಸವ ಸಂದೇಶ ನೀಡಬೇಕಿದ್ದ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅವರು ವೇದಿಕೆಯನ್ನು ಕೇಂದ್ರ ಸರ್ಕಾರದ ವಿರುದ್ಧ ಮಾತನಾಡಲು ಬಳಸಿಕೊಂಡರು. ರಾಜಕೀಯ ಭಾಷಣಕ್ಕೆ ಸರ್ಕಾರಿ ವೇದಿಕೆ ಬಳಸಿಕೊಳ್ಳಬಾರದು. ಈ ಬಗ್ಗೆ ವೇದಿಕೆಯಲ್ಲೇ ಪ್ರಶ್ನಿಸಬೇಕೆಂದಿದ್ದೆ. ನನ್ನ ಅಧ್ಯಕ್ಷತೆಯ ಸಮಾರಂಭವಾದ್ದರಿಂದ ಸುಮ್ಮನಾಗಿದ್ದೇನೆ. ಕೃಷ್ಣಬೈರೇಗೌಡರು ಉಸ್ತುವಾರಿ ವಹಿಸಿಕೊಂಡ ಬಳಿಕ ಯಾವ ಕೆಲಸಗಳೂ ಆಗುತ್ತಿಲ್ಲ. ನಗರದಲ್ಲಿ ರಸ್ತೆ ಹಾಳಾಗಿವೆ, ನಾಡ ಕಚೇರಿಯಲ್ಲಿ ರೈತರ ಕೆಲಸ ಆಗುತ್ತಿಲ್ಲ. ಬಜೆಟ್ ಬಗ್ಗೆ ಸಭೆ ನಡೆಸಿಲ್ಲ. ಲಂಚವಿಲ್ಲದೆ ಯಾವ ಕೆಲಸವೂ ಆಗುತ್ತಿಲ್ಲವೆಂದು ಆಕ್ರೋಶ ವ್ಯಕ್ತಪಡಿಸಿದರು.

### ಶಿವಲಿಂಗೇಗೌಡರಿಗೆ ತಿರುಗೇಟು

ತಮ್ಮನ್ನು ಬೈಯಲು ಜೆಡಿಎಸ್‌ನವರು ಸಮಾವೇಶ ಮಾಡಿದ್ದಾರೆಂದು ಅರಸೀಕೆರೆ ಶಾಸಕ ಕೆ.ಎಂ. ಶಿವಲಿಂಗೇಗೌಡ ಹೇಳಿದ್ದಾರೆ. ಈ ರೀತಿಯ ಭ್ರಮೆಯಿಂದ ಅವರು ಹೊರ ಬರಬೇಕು. ಅವರು ಪಕ್ಷ ಬಿಟ್ಟಿದ್ದರಿಂದ ಜೆಡಿಎಸ್‌ಗೆ ಯಾವ ನಷ್ಟವಾಗಿಲ್ಲ. ಸಚಿವ ಸ್ಥಾನ ಸಿಗುತ್ತದೆಂದು ಕಾಂಗ್ರೆಸ್ ಸೇರಿದ್ದಾರೆ. ಯಾವ ಕಾರಣಕ್ಕೂ ಅವರಿಗೆ ಸಚಿವ ಸಂಪುಟದಲ್ಲಿ ಸ್ಥಾನ ಸಿಗುವುದಿಲ್ಲ. ಕಾಂಗ್ರೆಸ್‌ಗೆ ಅವರು ಹೊಸ ಪೂಜಾರಿ, ಹೆಚ್.ಸಿ.ಬಾಲಕೃಷ್ಣ ಸೇರಿ ಅನೇಕರು ಸರದಿ ಸಾಲಿನಲ್ಲಿದ್ದಾರೆ ಎಂದರು.

ಬಿಳಿ ಚೌಡಯ್ಯ ಅವರನ್ನು ಜೆಡಿಎಸ್ ವಿಧಾನ ಪರಿಷತ್ ಸದಸ್ಯನನ್ನಾಗಿ ಮಾಡಲಿಲ್ಲವೆಂಬ ಕಾರಣಕ್ಕೆ ಪಕ್ಷ ತೊರೆದಿರುವುದಾಗಿ ಹೇಳಿದ್ದಾರೆ. ಹಾಗಾದರೆ ಎರಡೂವರೆ ವರ್ಷಗಳಿಂದ ಅವರಿಗೆ ಯಾವುದೇ ಸ್ಥಾನಮಾನ ನೀಡದೆ ಇರುವುದು ಏಕೆ ಎಂದು ಖಾರವಾಗಿ ಪ್ರಶ್ನಿಸಿದರು.

ಸುದ್ದಿಗೋಷ್ಟಿಯಲ್ಲಿ ಜೆಡಿಎಸ್ ತಾಲ್ಲೂಕು ಅಧ್ಯಕ್ಷ ಎಸ್.ದ್ಯಾವೇಗೌಡ, ನಗರಸಭೆ ಸದಸ್ಯ ಎಸ್.ಹೆಚ್. ವಾಸುದೇವ್ ಇದ್ದರು.

# ಪ್ರೀತಿಸಿ ಮದ್ವೆಯಾದರು ಹೊಂದಾಣಿಕೆ ಕೊರತೆಗೆ ಜೀವ ಬಲಿ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಪರಸ್ಪರ ಪ್ರೀತಿಸಿ ಮದುವೆಯಾಗಿದ್ದ ದಂಪತಿ ನಡುವೆ ಉಂಟಾದ ಬಿರುಕು ಪ್ರಾಣಕ್ಕೆ ಕುತ್ತು ತಂದಿದೆ. ಪತಿ ಆತ್ಮಹತ್ಯೆಗೆ ಯತ್ನಿಸಿದನೆಂದು ಜಿಗುಪ್ಸೆಗೊಂಡ ಪತ್ನಿ ನೇಣಿಗೆ ಶರಣಾಗಿದ್ದಾರೆ. ತಾಲೂಕಿನ ಅದ್ದಿಹಳ್ಳಿ ಗ್ರಾಮದಲ್ಲಿ ಘಟನೆ ನಡೆದಿದೆ. ಗ್ರಾಮದ ರಂಜಿತಾ (25) ಮೃತರು. ಪತಿ ಚೇತನ್ ಹಿಮ್ಸ್‌ನಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಐದು ವರ್ಷಗಳ ಹಿಂದೆ ಇಬ್ಬರೂ ಪ್ರೀತಿಸಿ ವಿವಾಹವಾಗಿದ್ದರು. ದಂಪತಿಗೆ ಒಂದೂವರೆ ವರ್ಷದ ಮಗು ಇದೆ. ಹೊಳೆನರಸೀಪುರ ತಾಲೂಕು ಬಿಟ್ಟಗೌಡನಹಳ್ಳಿಯ ಮಂಜೇಗೌಡ ಅವರ ಪುತ್ರಿ ರಂಜಿತಾ ಪ್ರೀತಿಸಿ ಮದುವೆಯಾಗಿದ್ದರು. ಇಬ್ಬರ ವಿವಾಹಕ್ಕೆ ಕುಟುಂಬಸ್ಥರ ವಿರೋಧ ನಡುವೆಯೂ ಚನ್ನರಾಯಪಟ್ಟಣ ತಾಲ್ಲೂಕಿನ ಜನಿವಾರ ಕೆರೆಯ ಈಶ್ವರ ದೇವಾಲಯದಲ್ಲಿ ವಿವಾಹವಾಗಿದ್ದರು.

ಪತಿ ಚೇತನ್ ಇತ್ತೀಚಿನ ದಿನಗಳಲ್ಲಿ ಅತಿಯಾಗಿ ಮೊಬೈಲ್ ನೋಡುತ್ತಿದ್ದ. ತನ್ನೊಂದಿಗೆ ಮೊದಲಿನಂತೆ ಬಾಂಧವ್ಯ ಇಲ್ಲ. ಬೇರೆಯವರ ಜೊತೆ ಚಾಟ್ ಮಾಡುತ್ತಿದ್ದಾನೆಂದು ರಂಜಿತಾ ಆರೋಪಿಸಿದ್ದರೆ ಚೇತನ್ ಸಹ ಅದೇ ತಿರುಗುಬಾಣ ಬಿಟ್ಟಿದ್ದ. ಈ ಸಂಬಂಧ ಎರಡೂ ಕುಟುಂಬದವರು ರಾಜಿ ಸಂಧಾನ ನಡೆಸಿದ್ದರು ಎಂದು ತಿಳಿದುಬಂದಿದೆ.

ಮೂರು ದಿನಗಳ ಹಿಂದೆ ದಂಪತಿ ನಡುವಿನ ಜಗಳ ವಿಕೋಪಕ್ಕೆ ತಿರುಗಿ ಚೇತನ್ ಮನೆಯಲ್ಲಿದ್ದ ಮಾತ್ರೆಗಳನ್ನು ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ್ದ. ತಕ್ಷಣ ಆತನನ್ನು ಹಿಮ್ಸ್‌ಗೆ ದಾಖಲಿಸಲಾಯಿತು. ಎರಡು ದಿನ ಪತಿ ಆರೈಕೆ ಮಾಡಲು ರಂಜಿತಾ ಇದ್ದಳು. ಮಂಗಳವಾರ ಸಂಜೆ ಮನೆಗೆ ತೆರಳಿದ್ದ ಆಕೆ ಈ ಘಟನೆಯಿಂದ ಮನನೊಂದು ನೇಣಿಗೆ ಶರಣಾಗಿದ್ದಾಳೆ. ಇಬ್ಬರ ಜಗಳದಿಂದ ಮಗು ಅನಾಥವಾಗಿದೆ.

### ಶಾಂತಿಗ್ರಾಮ ಠಾಣೆಯಲ್ಲಿ ಎಫ್ಐಆರ್

ವರದಕ್ಷಿಣೆ ಕಿರುಕುಳಕ್ಕೆ ಬೇಸತ್ತು ತಮ್ಮ ಮಗಳು ಆತ್ಮಹತ್ಯೆಗೆ ಶರಣಾಗಿದ್ದಾಳೆಂದು ರಂಜಿತಾ ತಂದೆ ಮಂಜೇಗೌಡ ಆರೋಪಿಸಿದ್ದಾರೆ. ವರದಕ್ಷಿಣೆ ಇಲ್ಲದೆ ಮದುವೆಯಾಗಿದ್ದೇನೆಂದು ಚೇತನ್ ಆಗಾಗ ಗಲಾಟೆ ಮಾಡುತ್ತಿದ್ದ. ತವರಿನಿಂದ ಹಣ ತರುವಂತೆ ನಿರಂತರ ಪೀಡಿಸುತ್ತಿದ್ದ. ಆ ಬಗ್ಗೆ ರಂಜಿತಾ ನಮಗೆ ಹೇಳಿಕೊಂಡಿದ್ದಳು. ಮಾವ ಚಂದ್ರೇಗೌಡ, ಅತ್ತೆ ಸುಜಾತಾ, ಚೇತನ್ ಸಹೋದರ ಚಂದನ್ ಸಹ ಕಿರುಕುಳ ನೀಡುತ್ತಿದ್ದರು. ನಾಲ್ಕೈದು ಸಲ ರಾಜಿ ಸಂಧಾನ ಮಾಡಿದರೂ ಸುಮ್ಮನಿರಲಿಲ್ಲ ಎಂದು ದೂರಿದರು. ಶಾಂತಿಗ್ರಾಮ ಠಾಣೆಯಲ್ಲಿ ಎಫ್ಐಆರ್ ದಾಖಲಾಗಿದೆ.

# ಉಡುವಾರೆ ಗ್ರಾಮದಲ್ಲಿ ಶ್ರೀಕಂಠೇಶ್ವರ ಸ್ವಾಮಿ ಕುಂಭಾಭಿಷೇಕ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ತಾಲ್ಲೂಕಿನ ಕಟ್ಟಾಯ ಹೋಬಳಿ ಉಡುವಾರೆ ಗ್ರಾಮದಲ್ಲಿ ಜ. 29 ರಿಂದ 31ರ ವರೆಗೆ ಶ್ರೀಕಂಠೇಶ್ವರಸ್ವಾಮಿ ಬಿಂಬ ವಿಮಾನ ಗೋಪುರ ಸ್ಥಿರ ಪ್ರತಿಷ್ಠಾ ಕುಂಭಾಭಿಷೇಕ ಮಹೋತ್ಸವ ಹಮ್ಮಿಕೊಳ್ಳಲಾಗಿದೆ ಎಂದು ದೇವಸ್ಥಾನ ಸೇವಾ ಸಮಿತಿ ಅಧ್ಯಕ್ಷ ಯು.ಟಿ.ಯೋಗೇಶ್ ತಿಳಿಸಿದರು.

ಸುದ್ದಿಗೋಷ್ಟಿಯಲ್ಲಿ ಬುಧವಾರ ಮಾತನಾಡಿ, ವೇ. ಎಸ್.ಫಾಲಚಂದ್ರ ಶಾಸ್ತ್ರಿ ಅವರ ನೇತೃತ್ವದಲ್ಲಿ ಧಾರ್ಮಿಕ ಕೈಂಕರ್ಯಗಳು ನೆರವೇರಲಿವೆ. ಗುರುವಾರ ಬೆಳಿಗ್ಗೆ ಇಷ್ಟದೇವತಾ ಪ್ರಾರ್ಥನೆ, ಗಂಗಾ ಪೂಜೆ, ಗೋಪೂಜೆ, ಯೋಗ ಶಾಲಾ ಪ್ರವೇಶ, ಗುರು ಪ್ರಾರ್ಥನೆ, ಮಹಾಸಂಕಲ್ಪ, ಗಣಪತಿ ಹೋಮ ಹಾಗೂ ಪೂರ್ಣಾಹುತಿ ನೆರವೇರಲಿದೆ ಎಂದರು.

ಜ. 30ರ ಶುಕ್ರವಾರ ಬೆಳಿಗ್ಗೆ ಕಲಶಾರಾಧನೆ, ಪಿಂಡಿಕಾಶುದ್ಧಿ, ಪ್ರಾಣ ಪ್ರತಿಷ್ಠೆ, ಪೂಚಾಂಗಹೋಮ, ಪ್ರತಿಷ್ಠಾಂಗ ಹೋಮ, ಮಹಾಪೂರ್ಣಾಹುತಿ, ಕುಂಭಾಭಿಷೇಕ, ಮಹಾಬಲಿ, ಮಹಾಮಂಗಳಾರತಿ ಹಾಗು ಪ್ರಸಾದ ವಿನಿಯೋಗ ಇರಲಿದೆ. ಧಾರ್ಮಿಕ ಕಾರ್ಯಕ್ರಮದಲ್ಲಿ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷ ಡಾ. ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ, ಹಾಸನ ಮಠದ ಶ್ರೀ ಶಂಭುನಾಥ ಸ್ವಾಮೀಜಿ, ವಿಶ್ವ ಒಕ್ಕಲಿಗರ ಮಠದ ಪೀಠಾಧ್ಯಕ್ಷ ಶ್ರೀ ನಿಶ್ಚಲಾನಂದನಾಥ ಸ್ವಾಮೀಜಿ, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಮಾಜಿ ಸಚಿವ ಹೆಚ್.ಕೆ.ಕುಮಾರಸ್ವಾಮಿ ಭಾಗವಹಿಸಲಿದ್ದು, ಶಾಸಕ ಸಿಮೆಂಟ್ ಮಂಜು ಅಧ್ಯಕ್ಷತೆ ವಹಿಸಲಿದ್ದಾರೆ ಎಂದರು.

ಸುದ್ದಿಗೋಷ್ಟಿಯಲ್ಲಿ ಜಗದೀಶ್, ನಿತಿನ್ ಇದ್ದರು.

# ಅರಣ್ಯ ಇಲಾಖೆ-ಸಾರ್ವಜನಿಕರ ನಡುವೆ ಬಾಂಧವ್ಯ ಹೆಚ್ಚಲಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಅರಣ್ಯ ಇಲಾಖೆ ಸಿಬ್ಬಂದಿ ಕೇವಲ ಕಾನೂನು ಪಾಲನೆಗೆ ಸೀಮಿತರಾಗದೆ ಸಾರ್ವಜನಿಕರೊಂದಿಗೆ ಸ್ನೇಹ ಹಾಗೂ ವಿಶ್ವಾಸ ಬೆಳೆಸಿಕೊಳ್ಳಬೇಕು ಎಂದು ಶಾಸಕ ಸಿಮೆಂಟ್ ಮಂಜು ಅವರು ಹೇಳಿದರು.

ತಾಲೂಕಿನ ಯಸಳೂರು ಪ್ರಾದೇಶಿಕ ವಲಯದಲ್ಲಿ 40 ಲಕ್ಷ ರೂ. ವೆಚ್ಚದಲ್ಲಿ ಮುಂಚೂಣಿ ಸಿಬ್ಬಂದಿ ವಸತಿ ಗೃಹ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿ, ರಾಜ್ಯದಲ್ಲಿ ಪರಿಸರ, ಅರಣ್ಯ ಹಾಗೂ ವನ್ಯಜೀವಿ ಸಂರಕ್ಷಣೆಯ ಮಹತ್ವದ ಜವಾಬ್ದಾರಿಯನ್ನು ಅರಣ್ಯ ಇಲಾಖೆ ಸಿಬ್ಬಂದಿ ನಿಸ್ವಾರ್ಥವಾಗಿ ನಿರ್ವಹಿಸುತ್ತಿದ್ದಾರೆ ಎಂದು ಶ್ಲಾಘಿಸಿದರು.

ಮುಂದಿನ ಪೀಳಿಗೆಗೆ ಅರಣ್ಯವನ್ನು ಉಳಿಸುವ ಕಾರ್ಯದಲ್ಲಿ ಸಾರ್ವಜನಿಕರ ಸಹಭಾಗಿತ್ವ ಅಗತ್ಯವಾಗಿದ್ದು, ಅರಣ್ಯ ಇಲಾಖೆ ಹಾಗೂ ಜನರ ನಡುವೆ ಹೊಂದಾಣಿಕೆ ಇದ್ದರೆ ಮಾತ್ರ ಅರಣ್ಯ ಸಂರಕ್ಷಣೆ ಪರಿಣಾಮಕಾರಿಯಾಗಿ ಸಾಧ್ಯವಾಗುತ್ತದೆ ಎಂದರು.



ಗ್ರಾಮೀಣ ಪ್ರದೇಶಗಳಲ್ಲಿ ಅರಣ್ಯದ ಮೇಲೆ ಅವಲಂಬಿತವಾಗಿರುವ ಜನರ ಸಮಸ್ಯೆಗಳಿಗೆ ಸ್ಪಂದಿಸುವ ಮಾನವೀಯ ಮನೋಭಾವ ಅರಣ್ಯ ಸಿಬ್ಬಂದಿಗಳಲ್ಲಿ ಇರಬೇಕು. ಸಾರ್ವಜನಿಕರೊಂದಿಗೆ ಗೌರವಯುತವಾಗಿ ವರ್ತಿಸುವುದು, ಅಹವಾಲು ಸಹಾನುಭೂತಿಯಿಂದ ಆಲಿಸುವುದು ಹಾಗೂ ಸಮಸ್ಯೆಗಳಿಗೆ ಸಾಧ್ಯವಾದಷ್ಟು ತ್ವರಿತ ಪರಿಹಾರ ನೀಡುವುದರಿಂದ ಇಲಾಖೆಯ ಮೇಲಿನ ವಿಶ್ವಾಸ ಮತ್ತಷ್ಟು ಬಲವಾಗುತ್ತದೆ. ಅರಣ್ಯ ರಕ್ಷಣೆಯ ಜೊತೆಗೆ ಮಾನವೀಯತೆಯೂ ಅಷ್ಟೇ ಮುಖ್ಯವಾಗಿದೆ ಎಂದು ಹೇಳಿದರು.

ಅರಣ್ಯ ಸಂರಕ್ಷಣೆ ಹಾಗೂ ವನ್ಯಜೀವಿ ರಕ್ಷಣೆಯಂತಹ ಕಠಿಣ ಮತ್ತು ಅಪಾಯಕರ ಕರ್ತವ್ಯ ನಿರ್ವಹಿಸುತ್ತಿರುವ ಅರಣ್ಯ ಇಲಾಖೆ ಸಿಬ್ಬಂದಿಗೆ ರಾಜ್ಯ ಸರ್ಕಾರ ಅಗತ್ಯ ಸೌಲಭ್ಯಗಳನ್ನು ಒದಗಿಸಬೇಕು ಎಂದು ಶಾಸಕರು ಒತ್ತಾಯಿಸಿದರು.

ವಲಯ ಅರಣ್ಯಾಧಿಕಾರಿ ರೇವಣ್ಣ ಸಿದ್ದಯ್ಯ ಬಿ. ಹಿರೇಮಠ್ ಹಾಗೂ ಇತರರಿದ್ದರು.

# ಆರೋಗ್ಯ ಇಲಾಖೆ ಹೊರಗುತ್ತಿಗೆ ನೌಕರರಿಂದ ಪ್ರತಿಭಟನೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ರಾಜ್ಯ ಆರೋಗ್ಯ ಇಲಾಖೆ ವಿವಿಧ ವೃಂದದ ಹೊರಗುತ್ತಿಗೆ ನೌಕರರ ಸೇವೆಯನ್ನು ಖಾಯಂ ಮಾಡಬೇಕು ಎಂದು ಆಗ್ರಹಿಸಿ ನೌಕರರು ಬುಧವಾರ ಪ್ರತಿಭಟನೆ ನಡೆಸಿದರು.

ನಗರದ ಡಬಲ್ ಟ್ಯಾಂಕ್ ಸಮೀಪದ ಸಂಘದ ಕೇಂದ್ರ ಕಚೇರಿಯಿಂದ ಹೇಮಾವತಿ ಪ್ರತಿಮೆ, ಆರ್.ಸಿ. ರಸ್ತೆ ಮೂಲಕ ಜಿಲ್ಲಾಧಿಕಾರಿ ಕಚೇರಿ ಎದುರು ಜಮಾಯಿಸಿದ ಪ್ರತಿಭಟನಾಕಾರರು ಬೇಡಿಕೆ ಈಡೇರಿಕೆಗೆ ಆಗ್ರಹಿಸಿದರು. ಹೊರಗುತ್ತಿಗೆ ನೌಕರರ ಸಂಘದ ರಾಜ್ಯಾಧ್ಯಕ್ಷ ಅಕ್ಷಯಗೌಡ ಮಾತನಾಡಿ, ಆರೋಗ್ಯ ಇಲಾಖೆ, ವೈದ್ಯಕೀಯ ಶಿಕ್ಷಣ ಇಲಾಖೆ ಹಾಗೂ ಆಯುಷ್ ಇಲಾಖೆ ಸಂಯೋಜಿತವಾಗಿ ರಾಜ್ಯಾದ್ಯಂತ ಸುಮಾರು 25 ಸಾವಿರಕ್ಕೂ ಅಧಿಕ ಹೊರಗುತ್ತಿಗೆ ನೌಕರರು ಸೇವೆ ಸಲ್ಲಿಸುತ್ತಿದ್ದಾರೆ. ಬಹುತೇಕ ನೌಕರರು



ಮೂಲಭೂತ ಸೌಲಭ್ಯಗಳಿಂದ ವಂಚಿತರಾಗಿದ್ದಾರೆ ಎಂದರು.

ಸರ್ಕಾರ ಹೊರ ಗುತ್ತಿಗೆ ನೌಕರರ ಕುರಿತು ದಿನಕ್ಕೊಂದು ಹೇಳಿಕೆ ನೀಡುತ್ತಿರುವುದರಿಂದ ಗೊಂದಲ ಉಂಟಾಗುತ್ತಿದೆ. ನೌಕರರಿಗೆ ಕೆಲಸ ಕಳೆದುಕೊಳ್ಳುವ ಭೀತಿ ಹೆಚ್ಚಾಗಿದೆ. ಸುಪ್ರೀಂ ಕೋರ್ಟ್ ನಿರ್ದೇಶನದಂತೆ ಕರ್ತವ್ಯ ನಿರ್ವಹಿಸುತ್ತಿರುವ ಹೊರಗುತ್ತಿಗೆ ನೌಕರರನ್ನು ಸಕ್ರಮಗೊಳಿಸಿ ಖಾಯಂ ಮಾಡಬೇಕು, ನೇರ ಪಾವತಿ ವ್ಯವಸ್ಥೆ ಜಾರಿಗೆ ತರಬೇಕು. ಸೇವಾ ಭದ್ರತೆ ಒದಗಿಸಬೇಕು ಹಾಗು ಇಂದಿನ ಜೀವನ ಮಟ್ಟಕ್ಕೆ ಅನುಗುಣವಾಗಿ ಕನಿಷ್ಠ ವೇತನ ನಿಗದಿಪಡಿಸಬೇಕೆಂದು ಆಗ್ರಹಿಸಿದರು.

ಸಂಘದ ಕಾರ್ಯದರ್ಶಿ ರಾಚಯ್ಯ, ಖಜಾಂಚಿ ಲೋಕೇಶ್, ಉಪಾಧ್ಯಕ್ಷ ಮಂಜುಳಾ, ಕುಮಾರ್, ಎಎಪಿ ರಾಜ್ಯ ಉಪಾಧ್ಯಕ್ಷ ಅಗಿಲೆ ಯೋಗೇಶ್ ಇತರರಿದ್ದರು.

# ಫೆ.1ಕ್ಕೆ ಸಕಲೇಶ್ವರ ಸ್ವಾಮಿ ಬ್ರಹ್ಮ ರಥೋತ್ಸವ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಸಕಲೇಶ್ವರ ಸ್ವಾಮಿ ರಥೋತ್ಸವ ಅಂಗವಾಗಿ ಜ. 30 ರಿಂದ ಫೆ. 3ರ ವರೆಗೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿದೆ ಎಂದು ಸಕಲೇಶ್ವರ ಸ್ವಾಮಿ ದೇವಸ್ಥಾನದ ಉತ್ಸವ ಸಮಿತಿ ಮಾಜಿ ಅಧ್ಯಕ್ಷ ನಂದಿಕೃಪ ದೇವರಾಜ್ ಹೇಳಿದರು.

ಸುದ್ದಿಗೋಷ್ಟಿಯಲ್ಲಿ ಬುಧವಾರ ಮಾತನಾಡಿ, ಜ. 30 ರಂದು ಗಣಪತಿ ಹೋಮ ಹಾಗೂ ತೀರ್ಥ ಪ್ರಸಾದ ವಿನಿಯೋಗ, ಸಂಜೆ ಧ್ವಜಾರೋಹಣ, ಮೃತ್ಸಂಗ್ರಹಣ, ಅಂಕುರಾರ್ಪಣ, ಕಳಸ ಪ್ರತಿಷ್ಠಾಪನೆ, ಜ. 31ರ ಬೆಳಿಗ್ಗೆ ಪಂಚಾಮೃತ ಅಭಿಷೇಕ, ರಾತ್ರಿ ಗಿರಿಜಾ ಕಲ್ಯಾಣ, ಫೆ. 1 ರಂದು ಸಕಲೇಶ್ವರಸ್ವಾಮಿಯವರ ಬ್ರಹ್ಮರಥೋತ್ಸವ ಜರುಗಲಿದೆ. ರಾಜಬೀದಿಯಲ್ಲಿ ಪುಷ್ಪಾಲಂಕೃತ ರಥೋತ್ಸವದೊಂದಿಗೆ ಮಹಾ ಅನ್ನಸಂತರ್ಪಣೆಯೂ ನಡೆಯಲಿದೆ. ಫೆ. 2 ರಂದು ಪುಷ್ಪಾಲಂಕೃತ ರಥೋತ್ಸವ ನೆರವೇರಲಿದೆ. ಫೆ. 3ರ ಅಂತಿಮ ದಿನ ಅವಭೃತೋತ್ಸವ, ತೀರ್ಥಸ್ನಾನ ಮತ್ತು ಶಯನೋತ್ಸವದೊಂದಿಗೆ ಉತ್ಸವ ಸಂಪನ್ನಗೊಳ್ಳಲಿದೆ.




ಫೆ. 1 ರಂದು ನಡೆಯಲಿರುವ ಬ್ರಹ್ಮ ರಥೋತ್ಸವದ ದಿನ ಸಂಜೆ 6.30ಕ್ಕೆ ಹಾಸನ ಆದಿಚುಂಚನಗಿರಿ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮಮೀಜಿ, ತೆಂಕಲಗೂಡು ಮಠದ ಪೀಠದ ಶ್ರೀ ಚನ್ನ ಮಲ್ಲಿಕಾರ್ಜುನ ಸ್ವಾಮೀಜಿ ಭಾಗವಹಿಸಲಿದ್ದಾರೆ ಎಂದರು.

ಸಮಿತಿಯ ಸದಸ್ಯ ರವಿಕುಮಾರ್ ಮಾತನಾಡಿ, ಈ ಹಿಂದೆ ದೇವಸ್ಥಾನ ಸಮಿತಿಯಿಂದ ಜಾತ್ರೆಯನ್ನು ಯಶಸ್ವಿಯಾಗಿ ನಡೆಸಿ ಸುಮಾರು ಐದು ಲಕ್ಷ ರೂಪಾಯಿ ಹಣವನ್ನು ಉಳಿಸಿ ದೇವಸ್ಥಾನದ ಅಭಿವೃದ್ಧಿಗೆ ಬಳಸಲಾಗಿತ್ತು. ಅದೇ ಮಾದರಿಯಲ್ಲಿ ಈ ಬಾರಿಯೂ ಜಾತ್ರೆಯನ್ನು ಕಡಿಮೆ ವೆಚ್ಚದಲ್ಲಿ, ಶಿಸ್ತುಬದ್ಧವಾಗಿ ನಡೆಸಲು ತೀರ್ಮಾನಿಸಲಾಗಿದೆ ಎಂದರು.

ಜಾಯಿಂಟ್ ವೀಲ್ ಸೇರಿದಂತೆ ವಿವಿಧ ಅಮ್ಯೂಸ್ಮೆಂಟ್ ಆಟಗಳ ಶುಲ್ಕವನ್ನು ವಯಸ್ಕರಿಗೆ 50 ರೂ. ಹಾಗೂ ಮಕ್ಕಳಿಗೆ 40 ರೂ. ನಿಗದಿ ಮಾಡಲಾಗಿದೆ. ಆಹಾರ ಮತ್ತು ಇತರೆ ವಸ್ತುಗಳನ್ನು ಕಡಿಮೆ ದರದಲ್ಲಿ ಮಾರಾಟ ಮಾಡುವಂತೆ ವ್ಯಾಪಾರಿಗಳಿಗೆ ನಿಬಂಧನೆ ವಿಧಿಸಲಾಗಿದೆ. ಸಾರ್ವಜನಿಕರಿಗೆ ಎಲ್ಲವೂ ಕೈಗೆಟುಕುವ ದರದಲ್ಲಿ ಲಭ್ಯವಾಗಬೇಕು ಎಂದರು.

ಸ್ಥಳೀಯ ಕಲಾವಿದರಿಗೆ ಅವಕಾಶ ಕಲ್ಪಿಸುವ ನಿಟ್ಟಿನಲ್ಲಿ ವಿಶೇಷ ಸಭಾಂಗಣ ನಿರ್ಮಿಸಲಾಗಿದೆ. ಪ್ರತಿದಿನ ಅದ್ದೂರಿ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ಸ್ಥಳೀಯ ಕ್ರೀಡಾಪಟುಗಳನ್ನು ಉತ್ತೇಜಿಸುವ ಉದ್ದೇಶದಿಂದ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಕಬಡ್ಡಿ, ಫುಟ್ಬಾಲ್, ಶಟಲ್‌ಕಾಕ್, ಕ್ರಿಕೆಟ್ ಟೂರ್ನಿ ಆಯೋಜಿಸಲಾಗಿದೆ. ಮಹಿಳೆಯರಿಗಾಗಿ ರಂಗೋಲಿ ಸ್ಪರ್ಧೆ, ಥ್ರೋಬಾಲ್ ಸೇರಿ ವಿವಿಧ ಕ್ರೀಡಾ ಸ್ಪರ್ಧೆ ಹಮ್ಮಿಕೊಳ್ಳಲಾಗಿದೆ ಎಂದರು.

ಭಕ್ತ ಮಂಡಳಿಯ ಅಧ್ಯಕ್ಷ ಬ್ಯಾಕರವಳ್ಳಿ ಜಯರಾಜ್, ಉಪಾಧ್ಯಕ್ಷ ಎಚ್.ಟಿ.ಸುರೇಶ್ , ಕಾರ್ಯದರ್ಶಿ ಅವಿನಾಶ್, ಸುರೇಶ್ ಉಪಸ್ಥಿತರಿದ್ದರು.

# ತಂಬಾಕು ಮಾರುಕಟ್ಟೆ ಹರಾಜು ತಾತ್ಕಾಲಿಕ ಸ್ಥಗಿತ: ಬೆಳೆಗಾರರ ಆತಂಕ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರಕಲಗೂಡು: ತಾಲೂಕಿನ ರಾಮನಾಥಪುರ ತಂಬಾಕು ಮಾರುಕಟ್ಟೆಯಲ್ಲಿ ಹರಾಜು ಪ್ರಕ್ರಿಯೆಯನ್ನು ವರ್ತಕರು ತಾತ್ಕಾಲಿಕವಾಗಿ ಸ್ಥಗಿತಗೊಳಿಸಿರುವುದು ಬೆಳೆಗಾರರಲ್ಲಿ ಆತಂಕ ಉಂಟುಮಾಡಿದೆ.

ಕಳೆದ 2025ರ ಅಕ್ಟೋಬರ್ 8ರಂದು ಈ ಸಾಲಿನ ತಂಬಾಕು ಹರಾಜು ಪ್ರಕ್ರಿಯೆಗೆ ಚಾಲನೆ ದೊರೆತಿದ್ದು, ಜ.23ರ ತನಕ ಅಂದಾಜು 6.50 ಮಿಲಿಯನ್ ಸೊಪ್ಪನ್ನು ವರ್ತಕರು ಖರೀದಿಸಿದ್ದಾರೆ. ಇನ್ನೂ 9 ಮಿಲಿಯನ್ ತಂಬಾಕು ಖರೀದಿ ಬಾಕಿ ಇದೆ. 2026ರ ಮಾರ್ಚ್ ಅಂತ್ಯಕ್ಕೆ ಹರಾಜು ಮಾರುಕಟ್ಟೆ ಮುಗಿಯಬೇಕಿದ್ದು, ವರ್ತಕರು ಖರೀದಿಯನ್ನು ಸ್ಥಗಿತಗೊಳಿಸಿರುವ ಹಿನ್ನೆಲೆ ಖರೀದಿ ಏಪ್ರಿಲ್ ಅಂತ್ಯದ ತನಕ ನಡೆಯುವ ಸಾಧ್ಯತೆ ಹೆಚ್ಚಿದೆ. ಇದುವರೆಗೂ ಹರಾಜು ಮಾರುಕಟ್ಟೆ 63ನಲ್ಲಿ 3.2 ತಂಬಾಕು ಖರೀದಿ ನಡೆದಿದ್ದರೆ ಪ್ಲಾಟ್ 7ರಲ್ಲಿ 3.7ಮಿಲಿಯನ್ ಸೊಪ್ಪು ಖರೀದಿಯಾಗಿದೆ. ಸರಾಸರಿ 284ರಿಂದ 285 ರೂ. ಕೆಜಿ ಸೊಪ್ಪಿಗೆ ಬೆಲೆ ಸಿಕ್ಕಿದೆ. 313ರಿಂದ 314ರೂ. ತನಕ ಒಂದು ಕೆಜಿ ಗುಣಮಟ್ಟದ ಸೊಪ್ಪಿಗೆ ಬೆಲೆ ಸಿಕ್ಕಿದೆ.

ಉತ್ತಮ ಬೆಲೆ ಸಿಗುವ ಸಂದರ್ಭದಲ್ಲಿ ಏಕಾಏಕಿ ವರ್ತಕರು ಮಾರುಕಟ್ಟೆಯನ್ನು ತನ್ನ ಹಿಡಿತಕ್ಕೆ ತೆಗೆದುಕೊಂಡಂತೆ ಖರೀದಿಯನ್ನು ಸ್ಥಗಿತಗೊಳಿಸಿರುವುದು ಬೆಲೆ ನಿರೀಕ್ಷೆಯಲ್ಲಿದ್ದ ಬೆಳೆಗಾರರಿಗೆ ನಿರಾಸೆ ಮೂಡಿಸಿದೆ ಎನ್ನಬಹುದು.

### ತಂಬಾಕು ಮಂಡಳಿ ನಿರ್ಲಕ್ಷ್ಯ

ಕೇಂದ್ರ ಸರ್ಕಾರ ತಂಬಾಕು ಉತ್ಪನ್ನಗಳ ಮೇಲೆ ತೆರಿಗೆ ಸುಂಕ ಹೆಚ್ಚಿಸಲು ಮುಂದಾಗಿರುವುದನ್ನು ವಿರೋಧಿಸಿ ವರ್ತಕರು ಮಾರುಕಟ್ಟೆಯಲ್ಲಿ ಕಳೆದ ಐದು ದಿನಗಳಿಂದ ಏಕಾಏಕಿ ಹೊಗೆಸೊಪ್ಪು ಹರಾಜು ಪ್ರಕ್ರಿಯೆ ಸ್ಥಗಿತಗೊಳಿಸಿದ್ದಾರೆ. ಬೆಳೆಗಾರರ ಹಿತ ಕಾಯಬೇಕಿದ್ದ ತಂಬಾಕು ಮಂಡಳಿ ಇದ್ದೂ ಇಲ್ಲದ ಸ್ಥಿತಿಗೆ ತಲುಪಿದೆ.



ಬೆಲೆಯಲ್ಲಿ ರೈತರಿಗೆ ಅನ್ಯಾಯವಾದಾಗ ನ್ಯಾಯ ದೊರಕಿಸಿಕೊಡಲಾಗದ ಪರಿಸ್ಥಿತಿಗೆ ಮಂಡಳಿ ತಲುಪಿದೆ. ವರ್ತಕರು ಕೂಡ ಬೆಳೆಗಾರರ ಹಿತವನ್ನು ನಿರ್ಲಕ್ಷ್ಯಿಸುತ್ತಾರೆ. ಈಗ ತಮಗೆ ಮಾತ್ರ ಅನ್ಯಾಯವಾಗುತ್ತಿದೆ ಎನ್ನುವ ಹುಸಿ ನಂಬಿಕೆ ಮುಂದಿಟ್ಟು ವರ್ತಕರು ಹರಾಕು ಪ್ರಕ್ರಿಯೆ ನಿಲ್ಲಿಸಿ ಬೆಳೆಗಾರರಿಗೆ ಕಿರುಕುಳ ನೀಡುತ್ತಿದ್ದಾರೆ ಎಂಬುದು ರೈತರ ಆಕ್ರೋಶವಾಗಿದೆ.

### ಫೆ. 1ಕ್ಕೆ ಹರಾಜು ಆರಂಭಗೊಳ್ಳಬೇಕು

ವರ್ತಕರ ಷೇರು ಹಾಗೂ ಮುಂಗಡ ಹಣ ಮುಟ್ಟುಗೋಲು ಹಾಕಿ ಬೆಳೆಗಾರರ ನೆರವಿಗೆ ಬರಬೇಕಿದ್ದ ತಂಬಾಕು ಮಂಡಳಿ ಮೂಕ ಪ್ರೇಕ್ಷಕನಂತೆ ವರ್ತಿಸುತ್ತಿರುವುದು ಖಂಡನಾರ್ಹ. ಫೆ. 1ರಿಂದ ಹರಾಜು ಪ್ರಕ್ರಿಯೆ ಪುನಾರಂಭಿಸದಿದ್ದರೆ ಎಲ್ಲ ಪ್ಲಾಟ್ ಫಾರಂ ಗಳನ್ನು ಬಂದ್ ಮಾಡಿಸಲಾಗುವುದು ಎಂದು ಬೆಳೆಗಾರರು ಎಚ್ಚರಿಸಿದ್ದಾರೆ.

# ಕಾಂಗ್ರೆಸ್‌ನಿಂದ ಡಿ.ಸಿ.ಸಣ್ಣಸ್ವಾಮಿ ಉಚ್ಚಾಟನೆಗೆ ಹೆಚ್ಚಿದ ಆಗ್ರಹ

## ಮುರುಳಿ ಮೋಹನ್ ಬೆಂಬಲಕ್ಕೆ ಲಿಂಗಾಯತ-ಒಕ್ಕಲಿಗರು | ಕಾಂಗ್ರೆಸ್‌ನಲ್ಲಿ ಬಿರುಸು ಪಡೆದ ಚಟುವಟಿಕೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಮುರುಳಿ ಮೋಹನ್ ವಿರುದ್ಧ ಜಿಲ್ಲಾ ಪಂಚಾಯಿತಿ ಸ್ಥಾಯಿ ಸಮಿತಿ ಮಾಜಿ ಅಧ್ಯಕ್ಷ ಡಿ.ಸಿ.ಸಣ್ಣಸ್ವಾಮಿ ಇಲ್ಲಸಲ್ಲದ ಆರೋಪ ಮಾಡುತ್ತಾ ಪಕ್ಷ ಸಂಘಟನೆಗೆ ಅಡ್ಡಿಯಾಗುತ್ತಿದ್ದು ಅವರನ್ನು ಕೂಡಲೇ ಪಕ್ಷದಿಂದ ಉಚ್ಚಾಟನೆ ಮಾಡಬೇಕೆಂದು ತಾಲ್ಲೂಕಿನ ಒಕ್ಕಲಿಗ ಹಾಗೂ ಲಿಂಗಾಯತ ಮುಖಂಡರು ಆಗ್ರಹಿಸಿದ್ದಾರೆ. ಪಟ್ಟಣದ ಲಯನ್ಸ್ ಭವನದಲ್ಲಿ ಸಭೆ ನಡೆಸಿದ ಎರಡೂ ಸಮುದಾಯಗಳ ಮುಖಂಡರು ಮುರುಳಿ ಮೋಹನ್ ಅವರಿಗೆ ಬೆಂಬಲ ಘೋಷಿಸಿದರು.

ಜ. 16ರಂದು ಪಟ್ಟಣದಲ್ಲಿ ನಡೆದ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅಧ್ಯಕ್ಷತೆಯ ಜನ ಸ್ಪಂದನ ಸಭೆಯಲ್ಲಿ ಮುರುಳಿ ಮೋಹನ್ ಅವರು, ಡಿ.ಸಿ.ಸಣ್ಣಸ್ವಾಮಿ ಅವರಿಗೆ ಅವಮಾನ ಮಾಡಿದ್ದಾರೆಂಬ ವಿಚಾರ ಭಾರೀ ಚರ್ಚೆಗೆ ಗ್ರಾಸವಾಗಿತ್ತು. ಈ ಹಿನ್ನೆಲೆಯಲ್ಲಿ ಸಭೆ ನಡೆಸಲಾಯಿತು. ಸಕಲೇಶಪುರದಲ್ಲಿ ಕಾಂಗ್ರೆಸ್ ಪಕ್ಷವನ್ನುಮತ್ತೆ ಅಧಿಕಾರಕ್ಕೆ ತರುವ ಸಂಕಲ್ಪದೊಂದಿಗೆ ಹಗಲಿರುಳು ಶ್ರಮಿಸುತ್ತಿರುವ ನಿಷ್ಠಾವಂತ ಕಾರ್ಯಕರ್ತರು ಹಾಗು ಮುಖಂಡರ ಸಹನೆಯನ್ನು ದುರುಪಯೋಗ ಮಾಡಿಕೊಳ್ಳಲಾಗುತ್ತಿದೆಯೆಂದು ಆಕ್ರೋಶ ವ್ಯಕ್ತಪಡಿಸಿದರು.

ಕ್ಷೇತ್ರದಲ್ಲಿ ಪಕ್ಷವನ್ನು ಪುನಃ ಅಧಿಕಾರಕ್ಕೆ ತರುವುದು ನಮ್ಮ ಸಂಕಲ್ಪ. ಆದರೆ ಅದಕ್ಕೆ ಸ್ವಪಕ್ಷಿಯರೇ ಅಡ್ಡಗಾಲು ಹಾಕುತ್ತಿದ್ದಾರೆ. ಜನರು ಕಾಂಗ್ರೆಸ್ ಪರ ಒಲವು ಹೊಂದಿದ್ದರೂ ಡಿ.ಸಿ.ಸಣ್ಣಸ್ವಾಮಿ ಹಾಗೂ ಬೆಂಬಲಿಗರು ಅದಕ್ಕೆ ಎಳ್ಳು ನೀರು ಬಿಡುತ್ತಿದ್ದಾರೆ. ಕೆಲವರ ವೈಯಕ್ತಿಕ ಸಾಧನೆಗೆ ಪಕ್ಷದ ಹಿತಾಸಕ್ತಿ ಬಲಿ ಕೊಡಲು ಸಾಧ್ಯವಿಲ್ಲ. ಹೈಕಮಾಂಡ್ ಕೂಡಲೇ ಮಧ್ಯ ಪ್ರವೇಶಿಸಬೇಕು. ವಿನಾಕಾರಣ ಗೊಂದಲ ಸೃಷ್ಟಿಸುವವರಿಗೆ ಪಾಠ ಕಲಿಸಬೇಕೆಂದು ಆಗ್ರಹಿಸಿದರು.

ಕಾಂಗ್ರೆಸ್ ಪಕ್ಷ ಹಂತ ಹಂತವಾಗಿ ಅಧಿಕಾರದ ಹೆಜ್ಜೆ ಇಡುವ ಸಂದರ್ಭದಲ್ಲಿ, ನಮ್ಮ ಸಾಧನೆಯ ಹಾದಿಯನ್ನು ದುರುದ್ದೇಶದಿಂದ ತಪ್ಪಿಸಲು ಕೆಲವರು ಸಂಚು ರೂಪಿಸುತ್ತಿದ್ದಾರೆ. ಚುನಾವಣಾ ಸಂದರ್ಭಗಳಲ್ಲಿ ನಮ್ಮೊಂದಿಗೆ ಇದ್ದು, ನಂತರ ಪಕ್ಷದ ವಿರುದ್ಧವಾಗಿ ಬೇರೆ ಪಕ್ಷಗಳಿಗೆ ಕೆಲಸ ಮಾಡುವವರು ಯಾರು ಎಂಬುದು ಚೆನ್ನಾಗಿ ಗೊತ್ತಿದೆ. ಆದರೂ ಪಕ್ಷದ ಒಗ್ಗಟ್ಟಿಗಾಗಿ ಆತ್ಮವಿಮರ್ಶೆ ಮಾಡಿಕೊಂಡು ಅವರು ಸರಿದಾರಿಗೆ ಬರಬಹುದು ಎಂಬ ಆಶಯದಿಂದ ಎಲ್ಲವನ್ನೂ ಸಹಿಸಿಕೊಂಡು ಬಂದಿದ್ದೇವೆ. ಸಭೆಗಳಲ್ಲಿ ಗಲಾಟೆ, ಸಭೆಯ ಶಾಂತಿಭಂಗ, ನಾಯಕತ್ವದ ಗೌರವ ಕುಂದಿಸುವ ಕೃತ್ಯಗಳು, ಪಕ್ಷದ ವಿರುದ್ಧ ಚಟುವಟಿಕೆಗಳು ಇವೆಲ್ಲವೂ ತಿಳಿದಿದ್ದರೂ ಕಾಂಗ್ರೆಸ್ ಹಿತದೃಷ್ಟಿಯಿಂದ ಮೌನ ವಹಿಸಲಾಗಿತ್ತು ಎಂದರು.

ಮುರಳಿ ಮೋಹನ್ ಅವರು ಬಿಜೆಪಿ ಮತ್ತು ಜೆಡಿಎಸ್‌ಗೆ ಪ್ರಬಲ ಪ್ರತಿರೋಧ ಒಡ್ಡಿದ್ದಾರೆ. ದಿನೇ ದಿನೇ ಅವರ ವರ್ಚಸ್ಸು ಹೆಚ್ಚಾಗುತ್ತಿದ್ದು, ಅದರೊಂದಿಗೆ ಪಕ್ಷವೂ ಬಲಿಷ್ಠವಾಗುತ್ತಿದೆ. ಸರ್ವ ಜಾತಿ ಸಮುದಾಯಗಳೊಂದಿಗೆ ಸಮಾನ ಸಂಬಂಧ ಹೊಂದಿರುವ ಅವರು ಒಕ್ಕಲಿಗ ಹಾಗು ವೀರಶೈವ ಲಿಂಗಾಯತ ಸಮುದಾಯ ವಿಶ್ವಾಸ ಗಳಿಸಿದ್ದಾರೆ. ಮುರಳಿ ಮೋಹನ್ ಅವರ ವರ್ಚಸ್ಸಿಗೆ ಹೆದರಿರುವ ವಿರೋಧ ಪಕ್ಷದವರು ನಮ್ಮವರಿಗೆ ಕುಮ್ಮಕ್ಕು ನೀಡುತ್ತಿದ್ದಾರೆ ಎಂದರು.

ಒಕ್ಕಲಿಗ ಮತ್ತು ವೀರಶೈವ ಲಿಂಗಾಯತ ಸಮುದಾಯಗಳು ಕಾಂಗ್ರೆಸ್ ಪಕ್ಷದೊಂದಿಗೆ ನಿಂತಿವೆ. ಮುಂದೆಯೂ ನಿಲ್ಲಲಿವೆ. ಪಕ್ಷದ ವಿರುದ್ಧ ಸಂಚು ರೂಪಿಸುವ ಯಾವ ವ್ಯಕ್ತಿ, ಪಕ್ಷಗಳಿಗೆ ಸಕಲೇಶಪುರದಲ್ಲಿ ಜಾಗವಿಲ್ಲ. ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರುವ ಹೋರಾಟದಲ್ಲಿ ನಾವು ಹಿಂದೆ ಸರಿಯುವುದಿಲ್ಲ ಎಂದರು.

ತಾಲ್ಲೂಕು ಕಾಂಗ್ರೆಸ್ ಅಧ್ಯಕ್ಷ ಬೈರಮುಡಿ ಚಂದ್ರು, ಮಾಜಿ ಅಧ್ಯಕ್ಷ ವಿದ್ಯಾಶಂಕರ, ಮಹಿಳಾ ಘಟಕದ ಅಧ್ಯಕ್ಷೆ ಅನ್ನಪೂರ್ಣ ಶ್ರೀಶೈಲ, ಬಗರ್ ಹುಕುಂ ಸದಸ್ಯ ಹೆಚ್.ಹೆಚ್.ಉದಯ್, ಗೋಪಾಲಸ್ವಾಮಿ, ವೀರಶೈವ ಸಮಾಜದ ಉಪಾಧ್ಯಕ್ಷ ಗಗನ್, ಪುರಸಭೆ ಮಾಜಿ ಅಧ್ಯಕ್ಷೆ ಕೌಸಲ್ಯ ಲಕ್ಷ್ಮಣಗೌಡ, ಅರವಿಂದ ಹೆತ್ತೂರು, ಬಿ.ಕೆ.ಮಹೇಶ್, ಸಂಗಪ್ಪ, ಪಿಎಲ್‌ಡಿ ಬ್ಯಾಂಕ್ ಉಪಾಧ್ಯಕ್ಷ ಹಿತೇಶ್, ದಿನೇಶ್, ಪುರಸಭೆ ನಾಮನಿರ್ದೇಶಿತ ಸದಸ್ಯ ಅಶೋಕ್ ಕಡಗರಹಳ್ಳಿ, ರಾಧಾಕೃಷ್ಣ, ಕುರಬುತ್ತೂರು ಗ್ರಾಮ ಪಂಚಾಯಿತಿ ಅಧ್ಯಕ್ಷ ವೆಂಕಟೇಶ್, ಸದಸ್ಯ ಅರ್ಜುನ್, ಸೋಮೇಗೌಡ, ಬ್ಯಾಕರವಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷ ರಂಗನಾಥ್, ಕ್ಯಾಮನಹಳ್ಳಿ ಗ್ರಾ.ಪಂ. ಅಧ್ಯಕ್ಷ ಮಲ್ಲೇಶ್, ಕುನಿಗನಹಳ್ಳಿ ಗ್ರಾ.ಪಂ.ಅಧ್ಯಕ್ಷ ಶಾಂತ ಮಹೇಶ್, ಕಾಮನಹಳ್ಳಿ ಜಯರಾಜ್, ವಸಂತ ಕೊಲ್ಲಹಳ್ಳಿ ಇತರರು ಉಪಸ್ಥಿತರಿದ್ದರು.

# ಹೆತ್ತೂರಿನಲ್ಲಿ ಇಂದು ಹಿಂದು ಸಮಾಜೋತ್ಸವ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ತಾಲ್ಲೂಕಿನ ಹೆತ್ತೂರಿನಲ್ಲಿ ಜ. 29ರಂದು ಹಿಂದು ಸಮಾಜೋತ್ಸವ ಹಮ್ಮಿಕೊಳ್ಳಲಾಗಿದೆ ಎಂದು ವಿಶ್ವ ಹಿಂದು ಪರಿಷತ್ ಜಿಲ್ಲಾ ಕಾರ್ಯದರ್ಶಿ ಕರಡಿಗಾಲ ಹರೀಶ್ ತಿಳಿಸಿದರು. ಸುದ್ದಿಗೋಷ್ಟಿಯಲ್ಲಿ ಮಾತನಾಡಿ, ಗುರುವಾರ ಮಧ್ಯಾಹ್ನ 3 ಗಂಟೆಗೆ ಹೆತ್ತೂರು ಗ್ರಾಮದ ಶ್ರೀ ಸತ್ಯಮಲ್ಲೇಶ್ವರಸ್ವಾಮಿ ದೇವಸ್ಥಾನ ಆವರಣದಿಂದ ಬೃಹತ್ ಶೋಭಾಯಾತ್ರೆ ನಡೆಯಲಿದೆ. ಸಂಜೆ 4.30ರಿಂದ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಸಭಾ ಕಾರ್ಯಕ್ರಮ ನಡೆಯಲಿದ್ದು, ಹೆಗ್ಗಡಹಳ್ಳಿ ಶ್ರೀಮಠದ ಚಂಗಡಹಳ್ಳಿಯ ಶ್ರೀ ಷಡ್ಕ್ಷರಹಿತೇಶ್ವರ ಸ್ವಾಮೀಜಿ ಆಶೀರ್ವಚನ ನೀಡಲಿದ್ದಾರೆ. ಅಧ್ಯಕ್ಷತೆಯನ್ನು ಜ್ಞಾನ ಸಮೃದ್ಧಿ ಟ್ರಸ್ಟ್‌ನ ಪ್ರವರ್ತಕ ಕಾಮನಹಳ್ಳಿ ತೀರ್ಥಾನಂದ ವಹಿಸಲಿದ್ದಾರೆ ಎಂದು ಹೇಳಿದರು.

ಶಾಸಕ ಸಿಮೆಂಟ್ ಮಂಜು, ಶೃತಿ ಮೆಡಿಕಲ್‌ನ ಹೆಚ್.ಪಿ.ಸತೀಶ್, ಹಿಂದು ಜಾಗರಣ ವೇದಿಕೆ ಪ್ರಾಂತ ಕಾರ್ಯಕಾರಣಿ ಸದಸ್ಯ ಕೆ.ಟಿ. ಉಲ್ಲಾಸ್ ಮುಖ್ಯ ಭಾಷಣ ಮಾಡಲಿದ್ದಾರೆ ಎಂದು ವಿವರಿಸಿದರು. ಸುದ್ದಿಗೋಷ್ಟಿಯಲ್ಲಿ ಕೆ.ಬಿ.ಕಿರಣ್ ಕರಡಿಗಾಲ, ರಾಘವೇಂದ್ರ ವಳಲಹಳ್ಳಿ, ಹೆಚ್.ಆರ್. ಸುದರ್ಶನ್ ವಳಲಹಳ್ಳಿ, ನೇತ್ರಾ ಸುರೇಶ್ ಹಾಗೂ ಉದ್ಯಮಿ ಪ್ರತಾಪ್ ಉಪಸ್ಥಿತರಿದ್ದರು.

# ಅರೇಹಳ್ಳಿಯಲ್ಲಿ ಭೀಮಾ ಕೋರೆಗಾಂವ್ ವಿಜಯೋತ್ಸವ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಭೀಮಾ ಕೋರೆಗಾಂವ್ ಕೇವಲ ಯುದ್ಧವಲ್ಲ ತುಳಿತಕ್ಕೆ ಒಳಗಾದ ಅಸ್ಪೃಶ್ಯ ಸಮುದಾಯದ ಮೇಲಿನ ದೌರ್ಜನ್ಯದ ವಿರುದ್ಧದ ನಡೆದ ಕ್ರಾಂತಿಕಾರಿ ಹೋರಾಟವಾಗಿದೆ ಎಂದು ದಲಿತ ಮುಖಂಡ ಶ್ರೀಧರ್ ಕಲಿವೀರ್ ತಿಳಿಸಿದರು.

ಅರೇಹಳ್ಳಿ ಭೀಮಾ ಕೋರೆಗಾಂವ್ ವಿಜಯೋತ್ಸವ ಸಮಿತಿ ವತಿಯಿಂದ ಆಯೋಜಿಸಿದ್ದ ಭೀಮಾ ಕೋರೆಗಾಂವ್ ವಿಜಯೋತ್ಸವ ಉದ್ಘಾಟಿಸಿ ಮಾತನಾಡಿದ ಅವರು, ಯಾವುದೇ ಸಮುದಾಯದ ಮೇಲೆ ದಬ್ಬಾಳಿಕೆ, ದೌರ್ಜನ್ಯ ಅತಿರೇಕಕ್ಕೆ ತಿರುಗಿದಾಗ ಅದರ ಪರಿಣಾಮ ಎಷ್ಟು ಕಠೋರವಾಗಿ ಇರುತ್ತದೆ ಎಂಬುದಕ್ಕೆ ಈ ಯುದ್ಧ ಸಾಕ್ಷಿಯಾಗಿದೆ ಎಂದರು.

ಇಂತಹ ಐತಿಹಾಸಿಕ ಯುದ್ಧದ ಬಗ್ಗೆ ಮಾಹಿತಿಯೇ ಇಲ್ಲದ ಸಂದರ್ಭದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅದನ್ನು ಪತ್ತೆ ಹಚ್ಚಿದ ಹಿನ್ನೆಲೆ ಇಂದು ಈ ಕಾರ್ಯಕ್ರಮ ಆಯೋಜನೆಗೊಂಡಿದೆ. ಆದರೆ ಇಂದಿಗೂ ಬಡವರ, ತುಳಿತಕ್ಕೆ ಒಳಗಾದವರ ಮೇಲೆ ಹಲ್ಲೆ ದೌರ್ಜನ್ಯಗಳು ನಿಂತಿಲ್ಲ. ಅಂಬೇಡ್ಕರ್ ಬರೆದಿರುವ ಸಂವಿಧಾನದ ಅಡಿಯಲ್ಲಿ ಸಮಾನತೆ ಕಟ್ಟುನಿಟ್ಟಿನ ಅನುಷ್ಠಾನವಾಗಬೇಕು ಎಂದರು.

ಲಂಡನ್ ದುಂಡು ಮೇಜಿನ ಸಮ್ಮೇಳನದಲ್ಲಿ ಅಂಬೇಡ್ಕರ್ ಸಮಾನತೆಗಾಗಿ ಮಾತನಾಡಿದ ಭಾಷಣ ಶ್ಲಾಘನೀಯ. ಇಂದಿಗೂ ಸಮ ಸಮಾಜ ನಿರ್ಮಾಣ ಸಾಧ್ಯವಾಗದೆ ಇರುವುದು ವಿಪರ್ಯಾಸ. ತಮ್ಮ ಹಕ್ಕುಗಳನ್ನು ಪಡೆಯಲು ಹಿಂದುಳಿದ ಸಮುದಾಯಗಳ ಎಲ್ಲರೂ ಮುಂದಾಗಬೇಕು. ಅಂಬೇಡ್ಕರ್ ಅವರ ಹಾದಿಯಲ್ಲಿ ನಡೆಯುವ ಮೂಲಕ ಸಂವಿಧಾನ ರಕ್ಷಣೆಗೆ ಒಕ್ಕೊರಲಿನಿಂದ ಒಗ್ಗೂಡಬೇಕು ಎಂದು ಕರೆ ನೀಡಿದರು. ಪಟ್ಟಣದಲ್ಲಿ ವಿವಿಧ ಕಲಾ ತಂಡಗಳೊಂದಿಗೆ ಭೀಮಾ ಕೋರೆಗಾಂವ್ ವಿಜಯಸ್ತಂಭ, ಅಂಬೇಡ್ಕರ್ ಅವರ ಭಾವಚಿತ್ರ ಹಾಗೂ ಭೀಮಾ ಕೋರೆಗಾಂವ್ ಯುದ್ಧದ ನಾಯಕ ಸಿದ್ದನಾಕ ಅವರ ಭಾವಚಿತ್ರಗಳ ಜೊತೆ ನಡೆದ ಮೆರವಣಿಗೆಯಲ್ಲಿ ಸಾವಿರಾರು ಸಂಖ್ಯೆಯ ಸಮುದಾಯದ ಜನರು ಭಾಗವಹಿಸಿ ಡಿಜೆಗೆ ಕುಣಿದು ಕುಪ್ಪಳಿಸಿದರು.

ಅಂಬೇಡ್ಕರ್ ಸೇವಾ ಸಮಿತಿ ಅಧ್ಯಕ್ಷ ಸಂದೇಶ್, ಅರೇಹಳ್ಳಿ ಭೀಮಾ ಭೀಮಾ ಕೋರೆಗಾಂವ್ ವಿಜಯೋತ್ಸವ ಸಮಿತಿ ಅಧ್ಯಕ್ಷ ವಿರೂಪಾಕ್ಷ, ಉಪಾಧ್ಯಕ್ಷ ಮಲ್ಲಿಕಾರ್ಜುನ್, ಕಾರ್ಯದರ್ಶಿ ಕುಮಾರ್, ದಿನೇಶ್, ಖಜಾಂಚಿ ಅನುಗಟ್ಟ ಕುಮಾರ್, ತಮಣ್ಣ ಇತರರು ಉಪಸ್ಥಿತರಿದ್ದರು.

# ಫೆ. 12ರಂದು ಹೊಸ ಲೇಬರ್ ಕೋಡ್ ವಿರುದ್ಧ ಮುಷ್ಕರ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಜಾರಿಗೆ ತರುತ್ತಿರುವ ನೂತನ ಕಾರ್ಮಿಕ ನೀತಿಗಳು ಮತ್ತು ಖಾಸಗೀಕರಣ ನೀತಿ ವಿರೋಧಿಸಿ ಫೆ. 12ರಂದು ಮುಷ್ಕರ ಹಮ್ಮಿಕೊಳ್ಳಲಾಗಿದೆ ಎಂದು ಸಿಐಟಿಯು ರಾಜ್ಯ ಪ್ರಧಾನ ಕಾರ್ಯದರ್ಶಿ ಎಸ್.ವರಲಕ್ಷ್ಮಿ ಹೇಳಿದರು.

ನಗರದ ನಿವೃತ್ತ ನೌಕರರ ಭವನದಲ್ಲಿ ನಡೆದ ಕಾರ್ಮಿಕ ಸಂಘಟನೆಗಳು ಮತ್ತು ಹಾಸನ ಜಿಲ್ಲಾ ಜನಪರ ಸಂಘಟನೆಗಳ ಜಿಲ್ಲಾ ಸಮಾವೇಶ ಉದ್ದೇಶಿಸಿ ಮಾತನಾಡಿ, ಕೇಂದ್ರ ಸರ್ಕಾರ ಜಾರಿಗೆ ತಂದಿರುವ ನಾಲ್ಕು ಲೇಬರ್ ಕೋಡ್‌ಗಳು (ಕಾರ್ಮಿಕ ಸಂಹಿತೆಗಳು) ಕಾರ್ಮಿಕರ ಹಿತಾಸಕ್ತಿಗೆ ವಿರುದ್ಧವಾಗಿದೆ. ಜೊತೆಗೆ ವಿದ್ಯುತ್ ಕಾಯ್ದೆ ತಿದ್ದುಪಡಿ ಮತ್ತು ಕೃಷಿ ವಿರೋಧಿ ಕಾಯ್ದೆಗಳನ್ನು ಕೈಬಿಡಬೇಕು ಎಂದು ಆಗ್ರಹಿಸಿದರು.

ಹೊಸ ನಿಯಮಗಳ ಪ್ರಕಾರ, ಮುಷ್ಕರ ನಡೆಸಲು 14 ದಿನಗಳ ಮೊದಲು ನೋಟಿಸ್ ನೀಡಿ, 60 ದಿನಗಳ ಕಾಲ ಕಾಯಬೇಕು.

ಈ ಅವಧಿಯಲ್ಲಿ ಮುಷ್ಕರ ನಡೆಸಿದರೆ ಜೈಲು ಶಿಕ್ಷೆ ಮತ್ತು ದಂಡ ವಿಧಿಸುವ ಕಠಿಣ ನಿಯಮಗಳನ್ನು ತರಲಾಗಿದೆ. ಇದು ಕಾರ್ಮಿಕರ ಮೂಲಭೂತ ಹಕ್ಕಾದ ಪ್ರತಿಭಟನೆಯ ಹಕ್ಕನ್ನೇ ಕಸಿದುಕೊಳ್ಳುವ ತಂತ್ರವಾಗಿದೆ ಎಂದು ಆರೋಪಿಸಿದರು.

ಟಿಮೇಕ್ ಇನ್ ಇಂಡಿಯಾಟಿ ಹೆಸರಿನಲ್ಲಿ ಸಾರ್ವಜನಿಕ ವಲಯದ ಉದ್ದಿಮೆಗಳು, ಬ್ಯಾಂಕುಗಳು ಮತ್ತು ವಿಮಾ ಕ್ಷೇತ್ರಗಳನ್ನು ಖಾಸಗೀಕರಣಗೊಳಿಸಲಾಗುತ್ತಿದೆ. ಅಣುಶಕ್ತಿ ವಲಯದಲ್ಲೂ ಖಾಸಗಿಯವರಿಗೆ ಅವಕಾಶ ನೀಡಲಾಗಿದ್ದು, ಯಾವುದೇ ಅವಘಡ ಸಂಭವಿಸಿದಲ್ಲಿ ಖಾಸಗಿ ಕಂಪನಿಗಳ ಉತ್ತರದಾಯಿತ್ವವನ್ನು ತೆಗೆದು ಹಾಕುವ ತಿದ್ದುಪಡಿ ತಂದಿರುವುದು ಅಪಾಯಕಾರಿ ಬೆಳವಣಿಗೆ ಎಂದು ಹೇಳಿದರು.

ದಲಿತರು, ರೈತರು ಮತ್ತು ಕಾರ್ಮಿಕರ ಮೇಲಿನ ದೌರ್ಜನ್ಯಗಳು ಹೆಚ್ಚಾಗುತ್ತಿದ್ದು, ಎಲ್ಲರೂ ಒಗ್ಗೂಡಿ ಹೋರಾಡುವ ಅನಿವಾರ್ಯತೆ ಇದೆ. ನಮ್ಮ ಹಕ್ಕುಗಳನ್ನು ಕಸಿದುಕೊಳ್ಳುತ್ತಿರುವವರ ವಿರುದ್ಧ ಸಂಘಟಿತರಾಗಿ ಫೆ. 12ರಂದು ಶಕ್ತಿ ಪ್ರದರ್ಶನ ಮಾಡಬೇಕಿದೆ ಎಂದು ಮುಖಂಡರು ಕರೆ ನೀಡಿದರು.

ಎಐಟಿಯುಸಿ ರಾಜ್ಯ ಮುಖಂಡ ಅಮಜದ್ ಅವರು, ಗಣರಾಜ್ಯೋತ್ಸವದಂದು ಸಂವಿಧಾನದ ಬಗ್ಗೆ ಭಾಷಣ ಮಾಡುವ ಸರ್ಕಾರ, ಆಡಳಿತದಲ್ಲಿ ಮಾತ್ರ ಸಂವಿಧಾನ ವಿರೋಧಿ ನೀತಿಗಳನ್ನು ಜಾರಿಗೊಳಿಸುತ್ತಿವೆ. ಕೇಂದ್ರದ ಬಿಜೆಪಿ ಮತ್ತು ರಾಜ್ಯದ ಕಾಂಗ್ರೆಸ್ ಸರ್ಕಾರಗಳು ಒಂದೇ ನಾಣ್ಯದ ಎರಡು ಮುಖಗಳಂತೆ ವರ್ತಿಸುತ್ತಿದ್ದು, ಕಾರ್ಮಿಕರನ್ನು ಆಧುನಿಕ ಗುಲಾಮಗಿರಿಗೆ ತಳ್ಳುತ್ತಿವೆ ಎಂದು ವಾಗ್ದಾಳಿ ನಡೆಸಿದರು.

ವಿದ್ಯುತ್ ತಿದ್ದುಪಡಿ ಮಸೂದೆಯಿಂದ ರೈತರ ಪಂಪ್ ಸೆಟ್‌ಗಳಿಗೆ ಮೀಟರ್ ಅಳವಡಿಸುವ ಹುನ್ನಾರ ಮತ್ತು ಬಹುರಾಷ್ಟ್ರೀಯ ಕಂಪನಿಗಳ ಪರವಾದ ಬೀಜ ಮಸೂದೆ ಜಾರಿಯಾಗುತ್ತಿದೆ. ಆದ್ದರಿಂದ ಈ ಹೋರಾಟ ಕೇವಲ ಕಾರ್ಮಿಕರದ್ದಲ್ಲ, ರೈತರೂ ಸೇರಿ ಒಗ್ಗೂಡಿ ನಡೆಸಬೇಕಾದ ಹೋರಾಟವಾಗಿದೆ ಎಂದರು.

ಜಿಲ್ಲಾ ಬ್ಯಾಂಕ್ ನೌಕರರ ಸಂಘದ ಅಧ್ಯಕ್ಷ ಕುಮಾರ್ ಮಾತನಾಡಿ, ಬ್ಯಾಂಕ್ ಉದ್ಯೋಗಿಗಳೂ ಕೂಡ ಕಾರ್ಮಿಕ ವರ್ಗಕ್ಕೆ ಸೇರಿದವರಾಗಿದ್ದು, ಹೊಸ ಲೇಬರ್ ಕೋಡ್‌ಗಳು ಬ್ಯಾಂಕ್ ನೌಕರರ ಮೇಲೂ ದುಷ್ಪರಿಣಾಮ ಬೀರಲಿವೆ. 5 ದಿನಗಳ ಬ್ಯಾಂಕಿಂಗ್ ವ್ಯವಸ್ಥೆ ಜಾರಿ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಮತ್ತು ದೇಶದ ಹಿತದೃಷ್ಟಿಯಿಂದ ಫೆ. 12ರಂದು ಎಲ್ಲಾ ಬ್ಯಾಂಕ್ ಒಕ್ಕೂಟಗಳು ಮುಷ್ಕರದಲ್ಲಿ ಭಾಗವಹಿಸಲಿವೆ ಎಂದು ತಿಳಿಸಿದರು.

ಸಿಐಟಿಯು ಜಿಲ್ಲಾಧ್ಯಕ್ಷ ಧರ್ಮೇಶ್, ಪ್ರಧಾನ ಕಾರ್ಯದರ್ಶಿ ಎಂ.ಬಿ.ಪುಷ್ಪ, ಖಜಾಂಚಿ ಅರವಿಂದ, ಎಐಟಿಯುಸಿ ಮುಖಂಡರಾದ ಧರ್ಮರಾಜ್, ಕರ್ನಾಟಕ ಪ್ರಾಂತ ರೈತ ಸಂಘದ ಜಿಲ್ಲಾಧ್ಯಕ್ಷ ಹೆಚ್.ಆರ್.ನವೀನ್ ಕುಮರ್, ನಿವೃತ್ತ ಬ್ಯಾಂಕ್ ನೌಕರರ ಸಂಘದ ಪರಮಶಿವಯ್ಯ ಮತ್ತು ಎಲ್ಐಸಿ ನೌಕರರ ಸಂಘದ ಮಂಜುನಾಥ್, ರಾಜಶೇಖರ್ ಭಾಗವಹಿಸಿದ್ದರು.

# ರಾಚೇನಹಳ್ಳಿ ಶಾಲೆಗೆ ಶಾಸಕ ಸ್ವರೂಪ್ ಭೇಟಿ, ಪರಿಶೀಲನೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ತಾಲ್ಲೂಕಿನ ರಾಚೇನಹಳ್ಳಿ ಸರ್ಕಾರಿ ಶಾಲೆಗೆ ಶಾಸಕ ಹೆಚ್.ಪಿ.ಸ್ವರೂಪ್ ಅವರು ಮಂಗಳವಾರ ದಿಢೀರ್ ಭೇಟಿ ನೀಡಿ ವ್ಯವಸ್ಥೆ ಪರಿಶೀಲಿಸಿದರು.

ಮೂಲಭೂತ ಸೌಕರ್ಯಗಳ ಕೊರತೆ ಬಗ್ಗೆ ಶಿಕ್ಷರರೊಂದಿಗೆ ಮಾಹಿತಿ ಪಡೆದು ಶೀಘ್ರ ಪರಿಹಾರ ಕ್ರಮ ಕೈಗೊಳ್ಳುವ ಭರವಸೆ ನೀಡಿದರು. ಅಲ್ಲದೆ ಹೊಸ ಕಟ್ಟಡಗಳ ಅಗತ್ಯತೆ ಬಗ್ಗೆ ಚರ್ಚಿಸಿ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಒದಗಿಸಬೇಕು. ಗುಣಮಟ್ಟದ ಆಹಾರ ವಿತರಣೆ ಮಾಡಬೇಕು. ಖಾಸಗಿ ಶಾಲೆಗೆ ಸ್ಪರ್ಧೆ ಒಡ್ಡುವ ನಿಟ್ಟಿನಲ್ಲಿ ಕ್ರೀಡೆ, ಸಾಂಸ್ಕೃತಿಕ, ಶಿಕ್ಷಣ ಎಲ್ಲಾ ವಿಚಾರದಲ್ಲಿಯೂ ಮಕ್ಕಳು ಮುಂಚೂಣಿಗೆ ಬರಬೇಕು. ಈ ನಿಟ್ಟಿನಲ್ಲಿ ಶಿಕ್ಷಕರು ಶ್ರಮ ವಹಿಸಬೇಕೆಂದು ಸೂಚನೆ ನೀಡಿದರು. ಕುಂದು ಕೊರತೆಗಳನ್ನು ಶೀಘ್ರದಲ್ಲಿ ಪರಿಹರಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಇದೇ ವೇಳೆ ಗ್ರಾಮದಲ್ಲಿ ಆಂಜನೇಯ ಸ್ವಾಮಿ ದೇವಾಲಯದ ಅಭಿವೃದ್ಧಿಗೆ 5 ಲಕ್ಷ ರೂ. ಹಣ ನೀಡಲಾಯಿತು. ಕಳೆದ ಹಲವು ದಿನಗಳಿಂದ ದುರಸ್ತಿಯಲ್ಲಿದ್ದ ದೇವಾಲಯ ಗಮನಿಸಿ ಸ್ಥಳೀಯರ ಮನವಿ ಮೇರೆಗೆ ಮುಂದಾಗಿದ್ದೇನೆ. ಮುಂದಿನ ದಿನಗಳಲ್ಲಿ ಇನ್ನಷ್ಟು ಸಹಾಯ ಮಾಡುವ ಮೂಲಕ ದೇವಾಲಯದ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲಾಗುವುದೆಂದು ಭರವಸೆ ನೀಡಿದರು.

# ಪೋಷಕರ ಸ್ಥಾನದಲ್ಲಿ ನಿಂತು ವಿದ್ಯಾರ್ಥಿಗಳ ಭವಿಷ್ಯ ರೂಪಿಸಿ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ವಸತಿ ನಿಲಯದಲ್ಲಿರುವ ವಿದ್ಯಾರ್ಥಿಗಳು ತಂದೆ ತಾಯಿಗಳಿಂದ ದೂರವಿರುತ್ತಾರೆ, ನೂರಾರು ವಿದ್ಯಾರ್ಥಿಗಳು ಭವಿಷ್ಯವನ್ನು ರೂಪಿಸುವ ಅವಕಾಶ ವಾರ್ಡನ್‌ಗಳ ಕೈಯಲ್ಲಿರುತ್ತದೆ, ಪೋಷಕರ ಸ್ಥಾನದಲ್ಲಿ ನಿಂತು ವಿದ್ಯಾರ್ಥಿಗಳ ಭವಿಷ್ಯ ರೂಪಿಸಬೇಕು ಎಂದು ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಸಲಹೆ ನೀಡಿದರು.

ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯಿತಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಂಯುಕ್ತಶ್ರಯದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರ ವಿಜ್ಞಾನ ಸಂಸ್ಥೆಯಿಂದ ನಿಲಯ ಪಾಲಕರಿಗೆ/ ನಿಲಯ ಮೇಲ್ವಿಚಾರಕರಿಗೆ ಜೀವನದ ಕೌಶಲ್ಯಗಳು ಹಾಗೂ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ಹಾಗೂ ಬೆಂಬಲ ಸೇವೆಗಳ ಕುರಿತ ಆಯೋಜಿಸಿದ್ದ ಕಾರ್ಯಗಾರದಲ್ಲಿ ಮಾತನಾಡಿದರು.

ಯಾವುದೇ ಕೆಲಸವಾದರೂ ಸಹ ಕರ್ತವ್ಯ ನಿಷ್ಠೆ ಇರಬೇಕು, ಆಸಕ್ತಿ ಇದ್ದರೆ ಯಾವುದೇ ಕೆಲಸವಾಗಲಿ ಮಾಡಿ ಸಾಧಿಸಬಹುದು. ಮಕ್ಕಳನ್ನು ಗೌರವ, ಪ್ರೀತಿಯಿಂದ ಮಾತನಾಡಿಸಿ ವಿದ್ಯಾಭ್ಯಾಸಕ್ಕೆ ಪ್ರೋತ್ಸಾಹಿಸಬೇಕು ಎಂದರು.

ವಸತಿ ನಿಲಯದಲ್ಲಿ ನೂರು ವಿದ್ಯಾರ್ಥಿಗಳಿದ್ದರೆ ನೂರು ಸಮಸ್ಯೆಗಳಿರುತ್ತವೆ ತಾಳ್ಮೆಯಿಂದ ಗೌರವದಿಂದ ಆಲಿಸಿ ಅರ್ಥ ಮಾಡಿಕೊಂಡು ಪರಿಹಾರ ನೀಡುವ ಕೆಲಸ ಮಾಡಬೇಕು, ಮಕ್ಕಳ ಸುರಕ್ಷತೆಗೂ ಹೆಚ್ಚಿನ ಆದ್ಯತೆ ನೀಡಬೇಕು ಎಂದರು.

ನಿಲಯದಲ್ಲಿ ಸ್ವಚ್ಛತೆ ಇಲ್ಲದಿದ್ದರೆ ವಿದ್ಯಾರ್ಥಿ ಆರೋಗ್ಯದ ಮೇಲೆ ಪರಿಣಾಮ ಬೀರುತ್ತದೆ. ಎಲ್ಲಾ ವಿದ್ಯಾರ್ಥಿ ನಿಲಯದಲ್ಲಿ ಕಡ್ಡಾಯವಾಗಿ ಸ್ವಚ್ಛತೆ ಕಾಪಾಡಿಕೊಳ್ಳವುದು ನಿಲಯ ಪಾಲಕರು ಕರ್ತವ್ಯ ಸ್ವಚ್ಛತೆಗೆ ಮೊದಲ ಆದ್ಯತೆಯಾಗಬೇಕು ಎಂದು ತಿಳಿಸಿದರು.

ಮಕ್ಕಳ ಆಲೋಚನೆಗಳನ್ನು ಅರ್ಥೈಸಿಕೊಂಡು ಅವರಲ್ಲಿರುವ ಪ್ರತಿಭೆಯನ್ನು ಪ್ರದರ್ಶಿಸಲು ಅವಕಾಶ ಕಲ್ಪಿಸುವ ಹಾಗೂ ಪ್ರೋತ್ಸಾಹಿಸುವ ಕೆಲಸವಾಗಬೇಕು.

ಅಡುಗೆ ಸಿಬ್ಬಂದಿ ಕಡ್ಡಾಯವಾಗಿ ಸಮವಸ್ತ್ರ ಧರಿಸಿಯೇ ಅಡುಗೆ ತಯಾರಿಸಬೇಕು ಎಂದರು.

ಪ್ರತಿಯೊಂದು ಹಾಸ್ಟೆಲ್‌ಗಳಲ್ಲಿ ವಿದ್ಯಾರ್ಥಿಗಳ ಆರೋಗ್ಯ ಕಡ್ಡಾಯವಾಗಿ ತಪಾಸಣೆ ಮಾಡಿಸಬೇಕು, ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಅನುಕೂಲವಾಗಲು ತರಬೇತಿ ನೀಡಬೇಕು, ಕೌಶಲ್ಯ ಬಳಸಿಕೊಳ್ಳಲು ತರಬೇತಿ ಸ್ವಂತ ಉದ್ಯೋಗ ಮಾಡಲು ಸಲಹೆ ನೀಡಬೇಕು ಎಂದರು.


ಪೋಕ್ಸೋ ಕಾಯ್ದೆಯ ನಿಯಮಗಳ ಬಗ್ಗೆ ಪ್ರತಿಯೊಂದು ವಿದ್ಯಾರ್ಥಿಗಳಿಗೆ ಕಡ್ಡಾಯವಾಗಿ ಅರಿವು ಮೂಡಿಸಬೇಕು. ವಿದ್ಯಾರ್ಥಿ ನಿಲಯದ ಆವರಣದಲ್ಲಿ ಗಿಡ ಮರಗಳನ್ನು ಬೆಳೆಸುವ ಮೂಲಕ ಆರೋಗ್ಯಕರ ವಾತಾವರಣ ನಿರ್ಮಾಣ ಮಾಡಬೇಕು ಎಂದು ತಿಳಿಸಿದರು.

ಪ್ರತಿಯೊಂದು ವಿದ್ಯಾರ್ಥಿ ನಿಲಯದಲ್ಲಿ ಗ್ರಂಥಾಲಯ ಇರಬೇಕು, ಗ್ರಂಥಾಲಯದಲ್ಲಿ ವಿದ್ಯಾಭ್ಯಾಸ ಪೂರಕ ಪುಸ್ತಕ, ಸ್ಪರ್ಧಾತ್ಮಕ ಪರೀಕ್ಷೆಯ ಪುಸ್ತಕಗಳು, ದಿನಪತ್ರಿಕೆಗಳು ಇರಬೇಕು ಎಂದು ತಿಳಿಸಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ.ಆರ್.ಪೂರ್ಣಿಮಾ ಮಾತನಾಡಿ, ವಿದ್ಯಾರ್ಥಿ ನಿಲಯಗಳಲ್ಲಿ ಗುಣಮಟ್ಟದ ಆಹಾರವನ್ನು ತಯಾರಿಸಿ ವಿದ್ಯಾರ್ಥಿಗಳಿಗೆ ನೀಡಬೇಕು. ಕೊಠಡಿಗಳಲ್ಲಿ, ಶೌಚಾಲಯಗಳಲ್ಲಿ ಸ್ವಚ್ಛತೆ ಕಾಪಾಡಬೇಕು ಎಂದರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಕುಮಾರ್ ಹಾಗೂ ಮತ್ತಿತತರು ಉಪಸ್ಥಿತರಿದ್ದರು.

# ಇಂದಿನಿಂದ ಕನ್ನಡದಲ್ಲಿ ಕುರ್ ಆನ್ ಪ್ರವಚನ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಮಾ ಅತೆ ಇಸ್ಲಾಮಿ ಹಿಂದ್ ಸಂಘಟನೆ ವತಿಯಿಂದ ನಗರದ ಎನ್.ಆರ್. ವೃತ್ತದಲ್ಲಿರುವ ಇಸ್ಲಾಮಿಕ್ ಸೆಂಟರ್‌ನಲ್ಲಿ ಜ. 29 ಹಾಗೂ 30ರಂದು ಕನ್ನಡದಲ್ಲಿ ಕುರ್‌ಆನ್ ಪ್ರವಚನ ಹಮ್ಮಿಕೊಳ್ಳಲಾಗಿದೆ.

ಗುರುವಾರ ಸಂಜೆ 6.45ಕ್ಕೆ ಧಾರ್ಮಿಕ ಸಹಿಷ್ಣುತೆ ಕುರ್ ಆನ್ ವಿಷಯ ಕುರಿತು ಮಂಗಳೂರಿನ ಶಾಂತಿ ಪ್ರಕಾಶನ ವ್ಯವಸ್ಥಾಪಕ ಮುಹಮ್ಮದ್ ಕುಂಞ ಉಪನ್ಯಾಸ ನೀಡಲಿದ್ದಾರೆ. ಸಕಲೇಶಪುರ ಉಪವಿಭಾಗಾಧಿಕಾರಿ ಡಾ.ಮಂಜುನಾಥ್, ಹಾಸನ ವಿಶ್ವವಿದ್ಯಾಲಯ ಕುಲಪತಿ ಪ್ರೊ.ತಾರಾನಾಥ, ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷ ಸತೀಶ್ ಪಟೇಲ್, ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್ ಪ್ರಾಂಶುಪಾಲೆ ಹೇಮಲತಾ, ಸರ್ಕಾರಿ ಕಲಾ ಕಾಲೇಜು ಪ್ರಾಂಶುಪಾಲ ಡಾ.ಎಂ.ಬಿ.ಇರ್ಷಾದ್ ಹಾಗು ಪತ್ರಕರ್ತ ವೆಂಕಟೇಶ್ ಪಾಲ್ಗೊಳ್ಳಲಿದ್ದಾರೆ.

ಜ. 30ರ ಶುಕ್ರವಾರ ಕಾಫಿರ್ ಮತ್ತು ಜಿಹಾದ್ ವಿಷಯವಾಗಿ ಉಪನ್ಯಾಸ ನಡೆಯಲಿದೆ. ಅಪರ ಪೊಲೀಸ್ ವರಿಷ್ಟಾಧಿಕಾರಿ ಎಂ.ಕೆ.ತಮ್ಮಯ್ಯ, ಪತ್ರಕರ್ತರ ಸಂಘದ ರಾಜ್ಯ ಉಪಾಧ್ಯಕ್ಷ ಹೆಚ್.ಬಿ.ಮದನಗೌಡ, ಪತ್ರಕರ್ತರಾದ ವೆಂಕಟೇಶ್, ಎಂ.ಎಸ್.ಸ್ವಾಗತ್, ಕರವೇ ಜಿಲ್ಲಾಧ್ಯಕ್ಷ ಮನುಕುಮಾರ್, ಡಾ. ಫಸೀ ಉರ್ ರಹ್ಮಾನ್, ಝುಲ್ಫಿಕರ್ ಅಹಮದ್ ಮತ್ತಿತರರು ಪಾಲ್ಗೊಳ್ಳಲಿದ್ದಾರೆ.

# ಇತಿಹಾಸದಲ್ಲಿ ಈ ದಿನ

## ಜನವರಿ-29

1861: ಅಮೆರಿಕದ ಕಾನ್ಸಾಸ್ ರಾಜ್ಯವು ಯೂನಿಯನ್‌ಗೆ ಸೇರ್ಪಡೆ

2002: ಅಮೆರಿಕ ಅಧ್ಯಕ್ಷ ಜಾರ್ಜ್ ಡಬ್ಲ್ಯೂ ಬುಶ್ ಆ್ಯಕ್ಸಿಸ್ ಆಫ್ ಇವಿಲ್ ಎಂಬ ಪದ ಬಳಸಿ ವಿಶ್ವ ರಾಜಕೀಯದಲ್ಲಿ ಚರ್ಚೆ ಹುಟ್ಟಿಸಿದರು.

### ಜನನ

1860: ಆಂಟನ್ ಚೆಖೋವ್- ಪ್ರಸಿದ್ಧ ರಷ್ಯನ್ ಕಥೆಗಾರ, ನಾಟಕಕಾರ

1954: ಓಪ್ರಾ ವಿನ್ ಫ್ರೇ-ಜಾಗತಿಕ ಖ್ಯಾತಿಯ ಮಾಧ್ಯಮ ಉದ್ಯಮಿ, ಸಮಾಜ ಸೇವಕಿ

1945: ಟಾಮ್ ಸೆಲೆಕ್-ಅಮೆರಿಕನ್ ಚಲನಚಿತ್ರ ನಟ

### ಮರಣ

2014: ಪೀಟ್ ಸೀಗರ್, ಅಮೆರಿಕನ್ ಜನಪದ ಗಾಯಕ, ಸಮಾಜ ಹೋರಾಟಗಾರ

2009: ಇನಾಸಿಯೊ ಲೂಲಾ ಡಾ ಸಿಲ್ವಾ ಅವರ ಆಪ್ತ ಸಹಚರ, ಬ್ರೆಜಿಲ್ ರಾಜಕೀಯ ಚಿಂತಕ

# ವೃತ್ತಿಯಲ್ಲಿ ಮೇಲು ಕೀಳು ಭಾವನೆ ಸರಿಯಲ್ಲ: ಮಲ್ಲೇಶ್ ಗೌಡ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಪ್ರತಿಯೊಬ್ಬರ ವೃತ್ತಿಯ ಶ್ರದ್ಧೆ, ನಿಷ್ಠೆಯನ್ನು ಗೌರವಿಸಬೇಕು, ಸಮಾಜದಲ್ಲಿ ಯಾವ ವೃತ್ತಿಯಲ್ಲಿ ಮೇಲು-ಕೀಳು ಇರಬಾರದು. ಎಲ್ಲರನ್ನೂ ಗೌರವಿಸಬೇಕು ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ. ಹೆಚ್.ಎಲ್.ಮಲ್ಲೇಶ್‌ಗೌಡ ತಿಳಿಸಿದರು.

ಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಹಾಸನಾಂಬ ಕಲಾಕ್ಷೇತ್ರದಲ್ಲಿ ಹಮ್ಮಿಕೊಂಡಿದ್ದ ಶ್ರೀ ಸವಿತಾ ಮಹರ್ಷಿ ಜಯಂತಿ ಉದ್ಘಾಟಿಸಿ ಮಾತನಾಡಿ, ಬ್ರಹ್ಮನ ಸೃಷ್ಟಿ ಶ್ರೇಷ್ಠವಾದದ್ದು. ಅದರಂತೆ ಎಲ್ಲರೂ ಸಮಾಜದಲ್ಲಿ ಶ್ರೇಷ್ಟರಾದರೆ ಸವಿತಾ ಸಮಾಜದ ವೃತ್ತಿಯನ್ನು ಗೌರವಿಸಬೇಕು. ಸಾಮಾಜಿಕವಾಗಿ ಮತ್ತು ಶೈಕ್ಷಣಿಕವಾಗಿ ಸವಿತಾ ಸಮಾಜ ಗೌರವನ್ನು ಹೊಂದಿದೆ ಎಂದರು. ಭೌತಿಕತೆ, ಜ್ಞಾನ ಯಾವುದೇ ಒಂದು ಜಾತಿ, ಧರ್ಮಕ್ಕೆ ಸೀಮಿತವಲ್ಲ, ಎಲ್ಲಾ ಇಂತಹ ಜಯಂತಿಯ ಆಚರಣೆಯ ಮೂಲಕ ಮಹರ್ಷಿಯವರ ಮುಂದಿನ ಪೀಳಿಗೆ ಕೊಂಡೊಯ್ಯಬೇಕು ಎಂದು ತಿಳಿಸಿದರು. ಜಿಲ್ಲಾಧಿಕಾರಿ ಕಚೇರಿ ಸಹಾಯಕ ರಮೇಶ ಮಾತನಾಡಿ, ಸವಿತಾ ಮಹರ್ಷಿಯವರ ನೆನಪಿಕೊಂಡು ಗೌರವ ಸಲ್ಲಿಸುವ ಕೆಲಸವಾಗಬೇಕು. ಯಾವುದೇ ವೃತ್ತಿಯಲ್ಲಿ ಕೌಶಲ್ಯವಿದ್ದರೆ ಗೌರವ ಸಿಗುತ್ತದೆ. ಕೌಶಲ್ಯ ಭರಿತ ಕೆಲಸ ನಿರ್ವಸಬೇಕು ಎಂದರು.

ಜ್ಞಾನವನ್ನು ಆಧಾರವಾಗಿ ಇಟ್ಟುಕೊಂಡು ಶಿಕ್ಷಣದ ಜ್ಞಾನವನ್ನು ಪಡೆದು ಗೌರವ ಕೊಡುವ ರೀತಿಯಲ್ಲಿ ನಮ್ಮನ್ನು ನಾವು ತೊಡಗಿಸಿಕೊಳ್ಳಬೇಕು. ಬೇರೆ ಬೇರೆ ರೀತಿಯಲ್ಲಿ ಉನ್ನತ ಸ್ಥಾನ ಪಡೆಯಬೇಕು ಎಂದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ತಾರಾನಾಥ್, ಜಿಲ್ಲಾ ಸವಿತಾ ಸಮಾಜದ ಅಧ್ಯಕ್ಷ ರವಿಕುಮಾರ್, ತಾಲೂಕು ಅಧ್ಯಕ್ಷ ವೆಂಕಟೇಶ್ ಇತರರಿದ್ದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248